ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ವಿಷಯ: ರಾಜ್ಯದಲ್ಲಿ ಅಕ್ರಮ ಸಾಗುವಳಿ ಮಾಡುತ್ತಿರುವವರನ್ನು ಸಕ್ರಮ ಗೊಳಿಸುವುದು

260 (3279)

ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅಕ್ರಮ ಸಾಗುವಳಿ ಮಾಡುತ್ತಿರುವವರನ್ನು ಸಕ್ರಮಗೊಳಿಸಲಾಗಿದೆ?

ಆ) ಅದಕ್ಕೆ ಸಂಬಂಧಪಟ್ಟ ಹಾಗೆ ನಿಗದಿ ಪಡಿಸಿದ್ದ ಕೊನೆ ದಿನಾಂಕ ಯಾವುದು?

ಇ) ಬಹುತೇಕ ಅಕ್ರಮ ಸಾಗುವಳಿ ಮಾಡುತ್ತಿರುವವರು ನಿಗದಿತ ದಿನಾಂಕದೊಳಗೆ ಅರ್ಜ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ದಿನಾಂಕವನ್ನು ಮತ್ತೆ ಮುಂದುವರಿಸಲಾಗುವುದೇ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):

ಅ) ಒಟ್ಟು 2,92,941 ಸಾಗುವಳಿದಾರರಿಗೆ ಸಕ್ರಮಗೊಳಿಸಲಾಗಿದೆ.

ಆ) ದಿನಾಂಕ: 9-9-1991.

ಇ) ಹೌದು.

ಈ) ಪರಿಶೀಲಿಸಲಾಗುವುದು.

ವಿಷಯ: ರೈತ ಸಂಜೀವಿನಿ ಯೋಜನೆ.

2602 (2419)

ಶ್ರೀ ಯು. ಬಿ. ಬಣಕಾರ್ (ಹಿರೇಕೆರೂರು): ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತ ಸಂಜೀವಿನಿ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು? ಈ